# ಅಪೂರ್ವ

## ರಗಡ್, ಗ್ಲಾಮರ್ ಎಲ್ಲಕ್ಕೂ ಸೈ



‘ರಾನಿ’ ಸಿನಿಮಾದಲ್ಲಿ ರಗಡ್ ಲುಕ್‌ನಲ್ಲಿ ಕಾಣಿಸಿಕೊಂಡಿದ್ದ ನಟಿ ಅಪೂರ್ವ, ಅಂಥ ಇನ್ನಷ್ಟು ವೈವಿಧ್ಯಮಯ ಪಾತ್ರಗಳಲ್ಲಿ ತೊಡಗಿಕೊಳ್ಳುತ್ತಿದ್ದಾರೆ. ಸೀದಾಸಾದಾ, ಗ್ಲಾಮರ್, ಚಾಲೆಂಜಿಂಗ್ ಹೀಗೆ ಭಿನ್ನ ಭಿನ್ನ ಪಾತ್ರಗಳಲ್ಲಿ ತಮ್ಮನ್ನು ನೋಡಿಕೊಳ್ಳಲು ಇಷ್ಟ ಎಂದಿದ್ದಾರೆ.

ನಟ ರವಿಚಂದ್ರನ್‌ಗೆ ಜೋಡಿಯಾಗಿ ‘ಅಪೂರ್ವ’ ಸಿನಿಮಾ ಮೂಲಕ ಚಂದನವನಕ್ಕೆ ಕಾಲಿಟ್ಟಿದ್ದ ನಟಿ ಅಪೂರ್ವ, ‘ವಿಕ್ಟರಿ 2’, ‘ಕೃಷ್ಣ ಟಾಕೀಸ್’, ‘ಪೆಂಟಗಾನ್’ ಸೇರಿದಂತೆ ಹಲವು ಚಿತ್ರಗಳಲ್ಲಿ ನಟಿಸಿದ್ದರು. ಸದ್ಯ ಇವರ ನಟನೆಯ ಮೂರ್ನಾಲ್ಕು ಸಿನಿಮಾಗಳು ಬಿಡುಗಡೆಯಾಗಬೇಕಿವೆ.

‘ನನ್ನ ನಟನೆಯ ಮೂರು ಸಿನಿಮಾಗಳು ಪೋಸ್ಟ್ ಪ್ರೊಡಕ್ಷನ್ ಹಂತದಲ್ಲಿವೆ. ಒಂದೊಂದು ಸಿನಿಮಾದಲ್ಲೂ ಒಂದೊಂದು ಭಿನ್ನ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದೇನೆ’ ಎಂದಿದ್ದಾರೆ. ಆರ್. ಬಾಲಚಂದ್ರ ನಿರ್ದೇಶನದ ‘ಕಣಂಜಾರು’ ಸಿನಿಮಾದಲ್ಲಿ ಕೂಡ ಕಾಣಿಸಿಕೊಳ್ಳುತ್ತಿದ್ದು, ನವೆಂಬರ್ ತಿಂಗಳಿನಲ್ಲಿ ಸಿನಿಮಾ ಬಿಡುಗಡೆಗೆ ಸಜ್ಜಾಗಿದೆ.

‘ಅಪೂರ್ವ’ ಬಳಿಕ ರವಿಚಂದ್ರನ್ ಮತ್ತು ಅಪೂರ್ವ ‘ಗೌರಿಶಂಕರ’ ಸಿನಿಮಾ ಮೂಲಕ ಮತ್ತೆ ಒಂದಾಗಿದ್ದಾರೆ. ಚಂದನ್ ಶೆಟ್ಟಿ ನಟನೆಯ ‘ಸೂತ್ರಧಾರಿ’, ಅಭಿಮನ್ಯು ಕಾಶಿನಾಥ್ ನಟನೆಯ ‘ಸೂರಿ ಲವ್ಸ್ ಸಂಧ್ಯಾ’ ಸಿನಿಮಾದಲ್ಲಿಯೂ ಇವರು ನಟಿಸಿದ್ದು, ಸಿನಿಮಾಗಳು ಬಿಡುಗಡೆಗೆ ಸಿದ್ಧವಾಗಿವೆ. ಎರಡು ಮಹಿಳಾ ಪ್ರಧಾನ ಸಿನಿಮಾಗಳಲ್ಲಿಯೂ ನಟಿಸುತ್ತಿದ್ದಾರೆ.

## ಈ ಜನರೇಷನ್ ‘ಸತ್ಯ’ಕಥೆ

‘ರಾಮಾ ರಾಮಾ ರೇ’, ‘ಒಂದಲ್ಲಾ ಎರಡಲ್ಲಾ’, ‘ಮ್ಯಾನ್ ಆಫ್ ದಿ ಮ್ಯಾಚ್’ ಸಿನಿಮಾ ಖ್ಯಾತಿಯ ನಿರ್ದೇಶಕ ಸತ್ಯಪ್ರಕಾಶ್ ತಮ್ಮ ಹೊಸ ಸಿನಿಮಾವನ್ನು ತೆರೆಗೆ ತರುವ ಸಿದ್ಧತೆಯಲ್ಲಿದ್ದಾರೆ.

‘X&Y’ ಸಿನಿಮಾ ಪ್ರಾಜೆಕ್ಟ್ ಸಂಪೂರ್ಣಗೊಳಿಸಿದ್ದು, ಶೀಘ್ರವೇ ತೆರೆ ಮೇಲೆ ತರುವುದಾಗಿ ಮಾಹಿತಿ ಹಂಚಿಕೊಂಡಿದ್ದಾರೆ. ನಿರ್ದೇಶನ ಮಾತ್ರವಲ್ಲದೆ ಇದೇ ಮೊದಲ ಬಾರಿಗೆ ಮುಖ್ಯ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದು, ಈ ಸಿನಿಮಾ ತಮಗೆ ಹೊಸ ಮೈಲಿಗಲ್ಲಾಗಲಿರುವ ನಿರೀಕ್ಷೆಯನ್ನೂ ವ್ಯಕ್ತಪಡಿಸಿದ್ದಾರೆ.



‘X&Y’ ಕಾಮಿಡಿ ಫ್ಯಾಂಟಸಿ ಸಿನಿಮಾ ಆಗಿದ್ದು, ಮನುಷ್ಯನ ಸಂಬಂಧಗಳು, ಸಾಮಾಜಿಕ ವಿಷಯಗಳನ್ನು ಎಕ್ಸ್‌ಪ್ಲೋರ್ ಮಾಡಲಿದೆ. ಮನುಷ್ಯನ ದೇಹದ ಕ್ರೋಮೋಸೋಮ್‌ಗಳನ್ನು ಸೂಚಿಸುವ ಸಿನಿಮಾ ಶೀರ್ಷಿಕೆ ಭಿನ್ನ ರೀತಿಯ ಸಂಭಾಷಣೆಯನ್ನೂ ಹೊಂದಿರಲಿದೆ ಎಂದು ಹೇಳಿಕೊಂಡಿದ್ದಾರೆ.

ಈಚೆಗೆ ಸತ್ಯಪ್ರಕಾಶ್, ಸಿನಿಮಾ ಚಿತ್ರೀಕರಣ ಪೂರ್ಣಗೊಂಡ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಘೋಷಣೆ ಮಾಡಿದ್ದು, “ಕ್ಯಾಮೆರಾ ರೋಲ್ ಆಗುವುದು ನಿಂತಿದೆ. ಉತ್ಸಾಹ ಈಗ ಆರಂಭಗೊಂಡಿದೆ. ‘X&Y’ ಚಿತ್ರೀಕರಣ ಮುಗಿದಿದೆ. ಸಿನಿಮಾ ಬಿಡುಗಡೆಗೆ ಕಾತರದಿಂದ ಕಾಯುತ್ತಿದ್ದೇವೆ” ಎಂದು ಬರೆದುಕೊಂಡಿದ್ದಾರೆ.

‘ಇದು ಇವತ್ತಿನ ಜನರೇಷನ್ ಕಥೆ. ಅಪ್ಪ–ಅಮ್ಮ ಆದವರ, ಅಪ್ಪ–ಅಮ್ಮ ಆಗುತ್ತಿರುವವರ, ಅಪ್ಪ–ಅಮ್ಮ ಆಗಬೇಕು ಎಂದುಕೊಂಡವರ ಕಥೆ. ಹಾಗೆಯೇ ಇವತ್ತಿನ ಹುಡುಗ–ಹುಡುಗಿಯರ ಕಥೆ, ಇವತ್ತಿನ ಮಕ್ಕಳ ಕಥೆ’ ಎಂದು ಸಿನಿಮಾ ಬಗ್ಗೆ ಮಾತನಾಡಿದ್ದಾರೆ.

ಸತ್ಯಾ ಪಿಕ್ಚರ್ಸ್ ಅಡಿಯಲ್ಲಿ ಸಿನಿಮಾ ನಿರ್ಮಾಣಗೊಂಡಿದ್ದು, ಅಥರ್ವ ಪ್ರಕಾಶ್, ಬೃಂದಾ ಆಚಾರ್ಯ, ಆಯನ, ಸುಂದರ್ ವೀಣಾ, ವೀಣಾ ಸುಂದರ್, ದೊಡ್ಡಣ್ಣ ತಾರಾಗಣದಲ್ಲಿರಲಿದ್ದಾರೆ. ಸಿನಿಮಾ ಪೋಸ್ಟ್ ಪ್ರೊಡಕ್ಷನ್ ಹಂತದಲ್ಲಿದ್ದು, ಡಿಸೆಂಬರ್ ತಿಂಗಳಿನಲ್ಲಿ ಬಿಡುಗಡೆ ಮಾಡಲು ಸಿದ್ಧತೆ ನಡೆಯುತ್ತಿದೆ.